ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಕಾಶಿಇ:ಆಯವ್ಯಯ:ಅ.ಉ.ಸ:07:2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:13.05.2020

## ಸುತ್ತೋಲೆ

ವಿಷಯ 2019-20ನೇ ಸಾಲಿನ ಅತಿಥಿ ಉಪನ್ಯಾಸಕರ ಗೌರವಧನ ಪಾವತಿ ಕುರಿತು

ಉಲ್ಲೇಖ ಈ ಕಛೇರಿಯ ಸಮ ಸಂಖ್ಯೆಯ ಆದೇಶ ದಿನಾಂಕ:12.05.2020

****

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸಿರುವ ಅತಿಥಿ ಉಪನ್ಯಾಸಕರಿಗೆ ಗೌರವಧನ ಪಾವತಿ ಸಂಬಂಧ ಅನುದಾನ ಬಿಡುಗಡೆ ಮಾಡಿರುವ ಈ ಕಛೇರಿಯ ಸಮ ಸಂಖ್ಯೆಯ ಉಲ್ಲೇಖಿತ ಆದೇಶದಲ್ಲಿ ನಮೂದಿಸಿರುವ ಉಲ್ಲೇಖ(3)ರ ಸರ್ಕಾರದ ದಿನಾಂಕ:11.05.2020ರ ಆದೇಶದಲ್ಲಿ 2019-20ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸಿರುವ ಅತಿಥಿ ಉಪನ್ಯಾಸಕರುಗಳಿಗೆ ಮಾರ್ಚ್-2020ರ ಅಂತ್ಯದವರೆಗೆ ಗೌರವಧನ ಪಾವತಿಸಲು ಅನುದಾನ ಬಿಡುಗಡೆ ಮಾಡಿ ಅನುಮತಿ ನೀಡಿರುವ ಪ್ರತಿಯನ್ನು ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಅಗತ್ಯ ಕ್ರಮಕ್ಕಾಗಿ ಈ ಸುತ್ತೋಲೆಯೊಂದಿಗೆ ಲಗತ್ತಿಸಿದೆ.

13/5/2020
ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ

ಪ್ರತಿಯನ್ನು:

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಿಗೆ.
2. ಕಛೇರಿ ಪ್ರತಿ.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2019-20ನೇ ಸಾಲಿನಲ್ಲಿ ಅತಿಥಿ ಉಪನ್ಯಾಸಕರ ಬಾಕಿ ಗೌರವಧನ ಪಾವತಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ

**ಓದಲಾಗಿದೆ:** ಕಾಲೇಜು ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಕಾಶಿಇ:ಆಯವ್ಯಯ:ಅ.ಉ.ಸಂ. 07:2020-21, ದಿನಾಂಕ: 22.04.2020.

ಮೇಲೆ ಓದಲಾದ ಕಾಲೇಜು ಶಿಕ್ಷಣ ಆಯುಕ್ತರ ಪತ್ರದಲ್ಲಿ 2019-20ನೇ ಸಾಲಿನಲ್ಲಿ ನೇಮಕ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರುಗಳಿಗೆ 2020 ಮಾರ್ಚ್ ಅಂತ್ಯದವರೆಗೆ ಬಾಕಿ ಗೌರವಧನ ಪಾವತಿಗಾಗಿ ಒಟ್ಟು ರೂ. 5315.14 ಲಕ್ಷಗಳ ಅನುದಾನವನ್ನು ಅವಶ್ಯವಿದ್ದು, ಅದನ್ನು ಬಿಡುಗಡೆ ಮಾಡುವಂತೆ ಕೋರಿದ್ದಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ

**ಸರ್ಕಾರದ ಆದೇಶ ಸಂಖ್ಯೆ ಇಡಿ 49 ಹೆಚ್‌ಪಿಸಿ 2019, ಬೆಂಗಳೂರು, ದಿನಾಂಕ: . 11.05.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿನಲ್ಲಿ ನೇಮಕ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರುಗಳಿಗೆ, 2020 ಮಾರ್ಚ್ ಅಂತ್ಯದವರೆಗೆ ಬಾಕಿ ಗೌರವಧನ ರೂ. 5315.14(ಐವತ್ತೂರು ಕೋಟಿ ಹದಿನೈದು ಲಕ್ಷದ ಹದಿನಾಲ್ಕು ಸಾವಿರ ರೂಪಾಯಿಗಳು ಮಾತ್ರ) ಲಕ್ಷಗಳನ್ನು 2020-21ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ 2202-03-103-2-01-324- ಇತರೆ ಸರ್ಕಾರಿ ಕಾಲೇಜುಗಳು-ಗೌರವ ಧನ ಕಾರ್ಯಕ್ರಮದಿಂದ ಈ ಕೆಳಕಂಡ ಷರತ್ತುಗಳನ್ನಾಧರಿಸಿ ನಿಯಮಾನುಸಾರ ಬಿಡುಗಡೆ ಮಾಡಲು ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರಿಗೆ ಅನುಮತಿಸಿ ಆದೇಶಿಸಿದೆ.

**ಷರತ್ತುಗಳು:**

1. 2020-21ನೇ ಸಾಲಿನ ಅತಿಥಿ ಉಪನ್ಯಾಸಕರುಗಳ ನೇಮಕವನ್ನು ಆರ್ಥಿಕ ಇಲಾಖೆಯ ಸಹಮತಿ ಪಡೆದ ನಂತರವೇ ಮಾಡುವುದು.
2. 2020-21ನೇ ಸಾಲಿನಲ್ಲಿ ನಿಗದಿಪಡಿಸಿ ಹಂಚಿಕೆ ಮಾಡಿರುವ ಆಯವ್ಯಯವನ್ನು ಹೆಚ್ಚಿಸುವಂತೆ ಕೋರಕೂಡದು.
3. ಸರ್ಕಾರಿ/ಅನುದಾನಿತ ಕಾಲೇಜುಗಳಲ್ಲಿ ಇರುವ ಕೋರ್ಸುಗಳನ್ನು ಪರಿಷ್ಕರಿಸಿ ಉಪನ್ಯಾಸಕರ ಅಗತ್ಯತೆಯನ್ನು ಕಡಿಮೆಗೊಳಿಸುವ ಬಗ್ಗೆ ಪರಿಶೀಲಿಸುವುದು.
4. ಅನುಮೋದಿತ ಸಂಖ್ಯೆಗಿಂತ 1/3 ಭಾಗಕ್ಕಿಂತ ಕಡಿಮೆ ವಿದ್ಯಾರ್ಥಿಗಳ ಕೋರ್ಸುಗಳನ್ನು ಮುಂದುವರೆಸದಿರುವ ಬಗ್ಗೆ ಪರಿಶೀಲಿಸುವುದು.
5. 2020-21ನೇ ಸಾಲಿನಲ್ಲಿ ಅತಿಥಿ ಉಪನ್ಯಾಸಕರ ಗೌರವ ಧನ ಪಾವತಿಗಾಗಿ ಈಗಾಗಲೇ ಬಿಡುಗಡೆ ಮಾಡಿರುವ ಅನುದಾನವನ್ನು ಸಹ ಬಾಕಿ ಪಾವತಿಗಾಗಿ ಉಪಯೋಗಿಸಿಕೊಳ್ಳುವುದು ಹಾಗೂ ಒಟ್ಟಾರೆ ಬಾಕಿ ರೂ. 5315.06 ಲಕ್ಷಗಳು ಮೀರಕೂಡದು.

ಈ ಆದೇಶವನ್ನು ಸರ್ಕಾರದ ಟಿಪ್ಪಣಿ ಸಂಖ್ಯೆ: ಎಫ್‌ಡಿ 123 ವೆಚ್ಚ-8/2020, ದಿನಾಂಕ: 08.05.2020ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ,

**(ಎನ್.ಆರ್.ಎರೆಕುಪ್ಪಿ)**
ಸರ್ಕಾರದ ಉಪಕಾರ್ಯದರ್ಶಿ ಮತ್ತು
ಆಂತರಿಕ ಆರ್ಥಿಕ ಸಲಹೆಗಾರರು
ಉನ್ನತ ಶಿಕ್ಷಣ ಇಲಾಖೆ(ಯೋಜನೆ)

ಇವರಿಗೆ,

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಎ&ಇ), ಬೆಂಗಳೂರು.
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ ಅವರ ಆಪ್ತ ಕಾರ್ಯದರ್ಶಿಗಳು.
4. ಉಪನಿರ್ದೇಶಕರು, ಖಜಾನೆ ಗಣಕ ಕೇಂದ್ರ, ನಂ.49, ಖನಿಜ ಭವನ ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ರವರ ಆಪ್ತ ಕಾರ್ಯದರ್ಶಿಗಳು.
6. ಸರ್ಕಾರದ ಉಪಕಾರ್ಯದರ್ಶಿ ಮತ್ತು ಆಂತರಿಕ ಆರ್ಥಿಕ ಸಲಹೆಗಾರರು, ಉನ್ನತ ಶಿಕ್ಷಣ ಇಲಾಖೆ(ಯೋಜನೆ), ರವರ ಆಪ್ತ ಕಾರ್ಯದರ್ಶಿಗಳು.
7. ಸಮನ್ವಯಾಧಿಕಾರಿಗಳು, ಮಾಹಿತಿ ಕೇಂದ್ರ, ಉನ್ನತ ಶಿಕ್ಷಣ ಇಲಾಖೆ.
8. ಹೆಚ್ಚುವರಿ ಪ್ರತಿಗಳು/ಕಡತ ಪ್ರತಿ/ಶಾಖಾ ರಕ್ಷಾ ಕಡತ